ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ವಸತಿ ಇಲಾಖೆಯಿಂದ ನಿವೇಶನಗಳನ್ನು ನಿರ್ಮಿಸಿರುವ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

603 (613) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ವಸತಿ ಇಲಾಖೆಯಿಂದ ಕಳೆದ ಎರಡು ವರ್ಷದಲ್ಲಿ ಹೊಸದಾಗಿ ಬಡಾವಣೆಗಳನ್ನು ನಿರ್ಮಾಣ ಮಾಡಲಾಗಿದೆ ;

(ಆ) ನಿರ್ಮಾಣ ಮಾಡಿರುವ ಬಡಾವಣೆಗಳಲ್ಲಿ ನಿರ್ಮಿಸಿರುವ ನಿವೇಶನಗಳ ಸಂಖ್ಯೆ ಎಷ್ಟು ; ಈ ನಿವೇಶನಗಳನ್ನು ಈಗಾಗಲೇ ಹಂಚಿಕೆ ಮಾಡಲಾಗಿದೆಯೇ ; (ಮಾಹಿತಿ ನೀಡುವುದು)

(ಇ) ಬೇಡಿಕೆ ಇರುವ ಜಿಲ್ಲೆಗಳಲ್ಲಿ ವಸತಿ ಬಡಾವಣೆಗಳನ್ನು ನಿರ್ಮಿಸಲು ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ; (ವಿವರ ನೀಡುವುದು)

(ಈ) ಬೆಂಗಳೂರಿನಲ್ಲಿ ಕಳೆದ 2 ವರ್ಷದಲ್ಲಿ ನಿರ್ಮಾಣ ಮಾಡಿರುವ ಬಹು ಮಹಡಿಗಳ ವಸತಿ ಯೋಜನೆಗಳು ಯಾವುವು ;

(ಉ) ರಾಜ್ಯದ ವಿವಿಧ ಜಿಲ್ಲೆಗಳಲ್ಲಿರುವ ಖಾಲಿ ಇರುವ ನಿವೇಶನಗಳನ್ನು ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದವರಿಗೆ/ಸಾಮಾನ್ಯ ವರ್ಗಕ್ಕೆ ವಿವೇಚನಾ ಕೋಟಾದಡಿಯಲ್ಲಿ ಹಂಚಿಕೆ ಮಾಡಲಾಗುತ್ತಿದೆಯೇ;

(ಊ) ಹಾಗಿದ್ದಲ್ಲಿ, ಕಳೆದ 2 ವರ್ಷದಲ್ಲಿ ಈ ಕೋಟಾದಡಿಯಲ್ಲಿ ಹಂಚಿಕೆ ಮಾಡಿರುವ ನಿವೇಶನಗಳನ್ನು ಯಾವ ಯಾವ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದವರಿಗೆ ಹಂಚಿಕೆ ಮಾಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)